ಅ) ಧಾರವಾಡ-ಹುಬ್ಬಳ್ಳಿ ಮಹಾನಗರದ ರಾಷ್ಟ್ರೀಯ ಹೆದ್ದಾರಿ-4 ಇದರ ಜೋಡು ರಸ್ತೆ ನಿರ್ಮಿಸಲು ಮುಖ್ಯ ಮಂತ್ರಿಗಳು ಒಪ್ಪಿಕೊಂಡು ಸಾರ್ವಜನಿಕ ಹೇಳಿಕೆ ಕೊಟ್ಟಿರುವುದು ಸರ್ಕಾರ ಗಮನಿಸಿದೆಯೇ;

ಆ) ಹಾಗಾದರೆ ರಾಷ್ಟ್ರೀಯ ಹೆದ್ದಾರಿಯಿಂದ ಲೋಕೋಪಯೋಗಿ ಇಲಾಖೆಯ ಹೆದ್ದಾರಿ ಪಡೆಯುವ ಪ್ರಕ್ರಿಯೆ ಮುಗಿದಿರುವುದೇ; ಭೂಮಿಯ ಅಕ್ವಿಜೇಶನ್ ಕೆಲಸ ಪ್ರಾರಂಭವಾಗಿದೆಯೇ;

ಇ) ಸದರಿ 30 ಕಿಮೀ ರಸ್ತೆ ಕಾಮಗಾರಿಗೆ ಎಷ್ಟು ಹಣ ಮಂಜೂರಾಗಿದೆ ಹಾಗೂ ಎಷ್ಟು ಅವಧಿಯಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಲು ಸಾಧ್ಯ?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು) :

ಅ) ಸರ್ಕಾರದ ಗಮನಕ್ಕೆ ಬಂದಿದೆ.

ಆ) ಇಲ್ಲ. ಪ್ರಾರಂಭವಾಗಿರುವುದಿಲ್ಲ.

ಇ) ಈ ರಸ್ತೆಯ ಅಭಿವೃದ್ಧಿಗೆ ಸದ್ಯ ಯಾವುದೇ ಹಣ ಇನ್ನೂ ಮಂಜೂರಾಗಿರುವುದಿಲ್ಲ. ಕೆಲಸ ಪ್ರಾರಂಭವಾದ ನಂತರ ಸುಮಾರು 18 ತಿಂಗಳಲ್ಲಿ ಮುಗಿಸಲು ಸಾಧ್ಯ.

ಸೇತುವೆ ನಿರ್ಮಾಣ ಕಾಮಗಾರಿಗೆ ಹಣ ಬಿಡುಗಡೆ

41 (139) ಶ್ರೀ ಚೌಡರೆಡ್ಡಿ (ಚಿಂತಾಮಣಿ) ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಿಂತಾಮಣಿ-ಚೀಳೂರು ರಸ್ತೆ 37ನೇ ಕಿಲೋಮೀಟರ್ ಬಳಿ ಸೇತುವೆ ನಿರ್ಮಾಣ ಕಾಮಗಾರಿ ಪೂರ್ಣಗೊಂಡಿದ್ದು ಸಂಚಾರಕ್ಕೆ ಅವಕಾಶ ಮಾಡಿಕೊಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ಕಾಮಗಾರಿಗೆ ಇಲ್ಲಿಯವರೆವಿಗೂ ಗುತ್ತಿಗೆದಾರರಿಗೆ ಬಿಡುಗಡೆ ಮಾಡಿರುವ ಹಣವೆಷ್ಟು; ಬಾಕಿ ಉಳಿದಿರುವ ಹಣವೆಷ್ಟು;

ಇ) ಬಾಕಿ ಉಳಿದಿರುವ ಹಣವನ್ನು ಗುತ್ತಿಗೆದಾರರಿಗೆ ಬಿಡುಗಡೆ ಮಾಡಲು ಸರ್ಕಾರ ಕೈಗೊಳ್ಳುವ ಕ್ರಮವೇನು ಹಾಗೂ ಎಂದು ಬಿಡುಗಡೆ ಮಾಡಲಾಗುವುದು?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು) :

ಅ) ಹೌದು.

ಆ) ಗುತ್ತಿಗೆದಾರರಿಗೆ ಈ ಕಾಮಗಾರಿಗೆ ಇಲ್ಲಿಯವರೆಗೂ ಯಾವುದೇ ಮೊತ್ತ ಪಾವತಿ ಮಾಡಿರುವುದಿಲ್ಲ. ಬಾಕಿ ಉಳಿದಿರುವ ಹಣ ರೂ. 8.52 ಲಕ್ಷ

ಇ) ಆರ್ಥಿಕ ಇಲಾಖೆಯಿಂದ ಹಣ ಭರವಸೆ ಪತ್ರ ಬಿಡುಗಡೆಯಾದ ನಂತರ ಗುತ್ತಿಗೆದಾರರಿಗೆ ಜೇಷ್ಠತೆ ಆಧಾರಿಸಿ ಪಾವತಿಸಲಾಗುವುದು.

ರಸ್ತೆ ದುರಸ್ತಿ

42 (140) ಶ್ರೀ ಚೌಡರೆಡ್ಡಿ (ಚಿಂತಾಮಣಿ) ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಿಂತಾಮಣಿ ಕ್ಷೇತ್ರಕ್ಕೆ ಸೇರಿದ ಚಿನ್ನಸಂದ್ರದಿಂದ ಚೀಳೂರಿನರೆಗೆ ಪ್ರತಿದಿನ ಸುಮಾರು 200 ರಿಂದ 300 ಲಾರಿಗಳು 25 ರಿಂದ 30 ಟನ್ ಮರಳನ್ನು ಸುತ್ತಮುತ್ತಲಿನ ಗ್ರಾಮಗಳಿಂದ ತುಂಬಿಕೊಂಡು ಬೆಂಗಳೂರಿಗೆ ಸಾಗಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;